# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಯವ/ಕೊಉ/ಪಿಆರ್/೦3/2020-21

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 16-01-2021

**ದಿನಾಂಕ: 16-01-2021 ರಂದು ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಗುರು, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀ. ಡಾ॥ ಪ್ರೇಮಾನಂದ್, ಆರೋಗ್ಯ ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಡಿಗೇಹಳ್ಳಿ
- ಶ್ರೀ ಬಸವರಾಜಪ್ಪ, ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 08.
- ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ
- ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು, ಅರೋಗ್ಯ
- ಶ್ರೀ. ಗೋವಿಂದರಾಜು, ಅಭಿಯಂತರರು, (BESCOM)

<u>ವಾರ್ಡ್ ಸಮಿತಿ ಸದಸ್ಯರು</u>

- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ ಜಿ ಎಸ್ ಕುಮಾರ್, ಭದ್ರಪ್ಪ ಬಡಾವಣೆ, ಸದಸ್ಯರು
- ಶ್ರೀ ಶ್ರೀಕಾಂತ್, ಆಮ್ಕೋ ಬಡಾವಣೆ, ಸದಸ್ಯರು
- ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಸದಸ್ಯರು
- ಶ್ರೀ ವಿ ಎಮ್ ನಾಯಕ್, ಸಹಕಾರನಗರ, ಸದಸ್ಯರು
- ಶ್ರೀಮತಿ ಪ್ರಭಾಭಟ್, ಡಿ ಎನ್‌ಕ್ಲೇವ್ ಸದಸ್ಯರು
- ಶ್ರೀ ವೆಂಕಟಪ್ಪ, ದೇವಿನಗರ, ಸದಸ್ಯರು
- ಶ್ರೀ ಅರಸಪ್ಪ, "ಡಿ ಬ್ಲಾಕ್", ಸಹಕಾರನಗರ, ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿಯ ಸದಸ್ಯರುಗಳು ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಗುರು, ಕಾ.ಪಾ.ಅ ಹಾಗೂ ನೋಡಲ್ ಅಧಿಕಾರಿ ರವರು ಮಾತನಾಡುತ್ತ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ ವಸತಿ ಕ್ಷೇಮಾಭಿವೃದಿ ಸಂಘದ ಸದಸ್ಯರುಗಳಿಗೆ ಹಾಗೂ ಅಧಿಕಾರಿಗಳಿಗೆ ವಿಚಾರಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಸದರಿ ಬಡಾವಣೆಯ ಬ್ಲಾಕ್ ಸ್ಪಾಟ್ ಸ್ವಚ್ಛವಾಗಿದೆ. ನೀರಿನ ಸಮಸ್ಯೆ ಶುರುವಾಗಿದೆ ಮತ್ತು ಯುಜಿಡಿ ಬ್ಲಾಕ್ ಸಮಸ್ಯೆಯನ್ನು ಒಂದು ವಾರವಾದರೂ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಬಗೆಹರಿಸಿರುವುದಿಲ್ಲ ಹಾಗೂ ಭದ್ರಪ್ಪ ಬಡಾವಣೆಯ 5ನೇ ಅಡ್ಡರಸ್ತೆಯಲ್ಲಿ ಬೋರ್‌ವೆಲ್ ದುರಸ್ಥಿ~~ಹೋ~~ಆಗಿರುತ್ತದೆ ಅದನ್ನು ಸರಿಪಡಿಸಿ ಕೊಡಲು ಸಭೆಗೆ ಮನವಿ ಮಾಡಿದರು.

ಈ ಕುರಿತು ನೋಡೆಲ್ ಅಧಿಕಾರಿ ರವರು ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (BWSSB) ರವರಿಗೆ ದೂರವಾಣಿ ಮೂಲಕ ಕರೆ ಮಾಡಿ ಮಾತನಾಡಿ ಯುಜಿಡಿ ವಾಹನ ದುರಸ್ಥಿಯಾಗಿರುವುದರಿಂದ, ಈ ಸಮಸ್ಯೆ ಕಾಡುತ್ತಿದೆ ಹಾಗೂ ಯುಜಿಡಿ ವಾಹನ ಆದಷ್ಟು ಬೇಗ ಸರಿಪಡಿಸಿ ಸಮಸ್ಯೆಯನ್ನು ಬಗೆಹರಿಸುತ್ತೇವೆಂದು ತಿಳಿಸಿದರು. ನಂತರ ಶ್ರೀಮತಿ. ಕವಿತ ಕಿ.ಆ.ನಿ ಮಾತನಾಡಿ ಬಾಲಾಜಿ ನಗರದ ಬ್ಲಾಕ್ ಸ್ಪಾಟ್‌ಗಳನ್ನು ತೆರವುಗೊಳಿಸಲು ಈಗಾಗಲೇ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಜಿ ಎಸ್ ಕುಮಾರ್, ಭದ್ರಪ್ಪ ಬಡಾವಣೆ, ಸದಸ್ಯರು ಮಾತನಾಡಿ, ಸದರಿ ಬಡಾವಣೆಯಲ್ಲಿ ಚರಂಡಿ ಸ್ಲಾಬ್ ಇಲ್ಲದ ಕಾರಣ ಸೊಳ್ಳೆ ಸಮಸ್ಯೆ ಇರುತ್ತದೆ ಎಂದು ಸಭೆಗೆ ತಿಳಿಸಿದರು. ಚರಂಡಿಯಲ್ಲಿ ಸಿಲ್ಟ್ ತುಂಬಿರುವುದರಿಂದ ನೀರಿನ ಹರಿವು ಸಾರಾಗವಾಗಿ ಹರಿಯದೆ ಸ್ಥಗಿತವಾಗಿರುತ್ತದೆ. ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯನ್ನುಂಟು ಮಾಡುತ್ತಿದೆ ಮತ್ತು ಮರದ ಕೊಂಬೆಗಳು ವಿದ್ಯುತ್ ತಂತಿಗಳಿಗೆ ತಗಲುತಿದ್ದು, ಇದರಿಂದ ಅನಾಹುತ ಆಗುವ ಮುಂಚಿತವಾಗಿ ಮರದ ಕೊಂಬೆಗಳನ್ನು ತೆಗೆಯಲು ಸಭೆಗೆ ತಿಳಿಸಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಸಿಲ್ಟ್ ಮತ್ತು ಟ್ರಾಕ್ಟರ್ ಬಿಟ್ಟು ಸಮಸ್ಯೆಯನ್ನು ಬಗೆಹರಿಸಲು ಶ್ರೀ ಪ್ರವೀಣ್ ರವರಿಗೆ ಸೂಚಿಸಿದರು. ವಾರ್ಡ್ ಕಾರ್ಯದರ್ಶಿಯಾದ ಶ್ರೀ ಪ್ರವೀಣ್ ರವರು ಮಾತನಾಡಿ ಡಿಸೆಂಬರ್ 31ಕ್ಕೆ ಸಿಲ್ಟ್ ಮತ್ತು ಟ್ರಾಕ್ಟರ್ ನ ಟೆಂಡರ್ ಅವಧಿಯು ಮುಗಿದಿರುತ್ತದೆ. ಹೊಸದಾಗಿ ಗುತ್ತಿಗೆದಾರರನ್ನು ~~ನೇಮಿಸಲು ಸೂಚಿಸಿರುತ್ತಾರೆ~~ ಎಂದು ಸಭೆಗೆ ತಿಳಿಸಿದರು. ಶ್ರೀ.ಗೋವಿಂದರಾಜು,

ಅಭಿಯಂತರರು, (BESCOM) ರವರು ಮಾತನಾಡಿ ಮರದ ಕೊಂಬೆಗಳನ್ನು ಈ ಕೂಡಲೇ ತೆರವು ಗೊಳಿಸುವುದಾಗಿ ಸಭೆಗೆ ತಿಳಿಸಿದರು.

ಶ್ರೀ. ವೆಂಕಟಸ್ವಾಮಪ್ಪ ದೇವಿನಗರದಲ್ಲಿ ಬೋರ್‌ವೆಲ್ ಇದ್ದು, ಈಗಾಗಲೇ ಸದರಿ ಬೋರ್‌ವೆಲ್‌ನಲ್ಲಿ ನೀರು ನಿಂತು ಹೋಗಿರುವುದರಿಂದ ಪರ್ಯಾಯ ಬೋರ್‌ವೆಲ್ ಕೊಳವೆಬಾವಿಯನ್ನು ಕೊರೆಯಿಸುವಂತೆ ಸಭೆಯಲ್ಲಿ ಮನವಿ ಮಾಡಿದರು. ನಮ್ಮ ಬಡಾವಣೆಯಲ್ಲಿ ಈಗಾಗಲೇ ನೀರಿನ ಸಮಸ್ಯೆ ಇರುವುದರಿಂದ ಬಡಾವಣೆಗಳಲ್ಲಿ ನೀರಿನ ಅಭಾವ ಹೆಚ್ಚಾಗಿರುತ್ತದೆ ಹಾಗೂ ಕಾವೇರಿ ನೀರು ಸಹ ಸಮರ್ಪಕವಾಗಿ ಪೂರೈಕೆ ಆಗುತ್ತಿಲ್ಲವೆಂದು ತಿಳಿಸಿದರು.

ಶ್ರೀಮತಿ ಪ್ರಭಾಭಟ್, ಡಿ ಎನ್‌ಕ್ಲೇವ್ ಸದಸ್ಯರು ಮಾತನಾಡಿ  ಚರಂಡಿಗಳಲ್ಲಿ ತುಂಬಿರುವ ಮಣ್ಣನ್ನು ತೆರವುಗೊಳಿಸಲು ವಾರ್ಡ್ ಅಧಿಕಾರಿಗಳಿಗೆ ಕೋರಿದರು.

ಶ್ರೀ ಪ್ರವೀಣ್, ಕಿರಿಯ ಅಭಿಯಂತರರು ಮಾತನಾಡಿ ಸದರಿ ಸಿಲ್ಟ್ ಮಣ್ಣನ್ನು ತೆಗೆದು ಒಣಗಿದ ನಂತರ ಡಂಪಿಂಗ್ ಯಾರ್ಡ್‌ಗೆ ಸ್ಥಳಾಂತರಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಸದಸ್ಯರು ರವರು ಸದರಿ ಬಡಾವಣೆಯ ಬೀದಿ ದೀಪಗಳ ಸಮಸ್ಯೆ ಇದ್ದು, ಸಾರ್ವಜನಿಕರು ರಾತ್ರಿವೇಳೆ ಸಂಚಾರಿಸುವ ಸಂದರ್ಭದಲ್ಲಿ ತೊಂದರೆಯುಂಟಾಗಿರುವುದಾಗಿ ತಿಳಿಸಿದರು ಸಭೆಗೆ ತಿಳಿಸಿದರು.

ಈ ಸಂದರ್ಭದಲ್ಲಿ ರವಿ, ಗುತ್ತಿಗೆದಾರರು ವಿದ್ಯುತ್ ವಿಭಾಗ ರವರು ಎಲ್ಇಡಿ ಬಲ್ಬ್‌ಗಳ ಸಮಸ್ಯೆಯನ್ನು ಸ್ಥಳಪರಿಶೀಲಿಸಿ ಬಗೆಹರಿಸುವುದಾಗಿ ತಿಳಿಸಿದರು.

ಶ್ರೀಮತಿ ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ರವರು ಭದ್ರಪ್ಪ ಬಡಾವಣೆಯಲ್ಲಿ ಸ್ಕೈವಾಕ್ ಕಾರ್ಯವು ಸ್ಥಗಿತಗೊಂಡಿರುತ್ತದೆ. ಆದ್ದರಿಂದ ಸಾರ್ವಜನಿಕರಿಗೆ ರಸ್ತೆಯನ್ನು ದಾಟಲು ತುಂಬಾ ತೊಂದರೆ ಉಂಟಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ರವರು ಭದ್ರಪ್ಪ ಬಡಾವಣೆಯಲ್ಲಿ ಸ್ಕೈವಾಕ್ ಕಾರ್ಯವು ಸ್ಥಗಿತಗೊಂಡಿರುವ ಬಗ್ಗೆ ಮಾತಾನಾಡುತ್ತ ಸ್ಕೈವಾಕ್ ಪಕ್ಕದ ಮನೆಯವರು ನ್ಯಾಯಲಯದಲ್ಲಿ ದಾವೆಯನ್ನು ಹೂಡಿರುತ್ತಾರೆ. ಆದ ಕಾರಣ ನ್ಯಾಯಲಯವು ಸ್ಕೈವಾಕ್ ಕಾರ್ಯವನ್ನು ಸ್ಥಗಿತಗೊಳಿಸಿ ಯತಾಸ್ಥಿತಿ ಕಾಪಾಡಲು ಸೂಚಿಸಿರುತ್ತದೆ. ಆದ ಕಾರಣ ಕಾಮಗಾರಿಯು ಸ್ಥಗಿತಗೊಂಡಿರುತ್ತದೆ ಎಂದು ಸಭೆಗೆ ತಿಳಿಸಿದರು.

ಶ್ರೀಮತಿ ಕವಿತ ಕಿ.ಆ.ನಿ ರವರು ಮಾತನಾಡಿ ಸ್ವಚ್ಛ ಸರ್ವೆಕ್ಷನ್ ಕಾರ್ಯಕ್ರಮದ ಬಗ್ಗೆ ಸಭೆಗೆ ತಿಳಿಸುತ್ತ ಬಿಬಿಎಂಪಿಗೆ ತಮ್ಮ ಅಮೂಲ್ಯವಾದ ಮತವನ್ನು ನೀಡಿ ಪ್ರೊತ್ಸಾಹಿಸಲು ಸಭೆಗೆ ಕೇಳಿದರು.

ಶ್ರೀ ಗುರು, ಕಾ.ಪಾ.ಅ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

(ಪ್ರವೀಣ್ ಎ.ಆರ್.)
ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ

(ಶ್ರೀ ಗುರು)
ಕಾರ್ಯಪಾಲಕ ಅಭಿಯಂತರರು ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

ಪ್ರತಿಯನ್ನು:-

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
9. ಕಛೇರಿ ಕಡತಕ್ಕೆ.